ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ**

**ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ: ಸಿ4(7).ಸ.ಪ್ರೌ.ಶಾ.ಶಿ.ವರ್ಗಾ 17/2021-22 ದಿನಾಂಕ:23-12-2021

-:ಅಧಿಕೃತ ಜ್ಞಾಪನಾ:-

ವಿಷಯ: 2020-21 ನೇ ಸಾಲಿನ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರ ವಿಭಾಗದ ಹೊರಗಿನ ಕೋರಿಕೆ ವರ್ಗಾವಣೆಯ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಮುಂದೂಡುವ ಬಗ್ಗೆ.

ಉಲ್ಲೇಖ:1. ಮಾನ್ಯ ಆಯುಕ್ತರು ಸಾ.ಶಿ.ಇಲಾಖೆ ಬೆಂಗಳೂರು ರವರ ಪತ್ರ ಸಂಖ್ಯೆ: ಶಿ.ವ.ಕೋಶ.ಸಾ.ವ. 01/2020-21 ದಿನಾಂಕ:25-11-2021.

2.ವಿಭಾಗೀಯ ಕಾರ್ಯದರ್ಶಿಗಳು ಹಾಗೂ ಪದನಿಮಿತ್ತ ಜಂಟಿ ನಿರ್ದೇಶಕರು ಕ.ಪ್ರೌ.ಶಿ.ಪ. ಮಂಡಳಿ, ಸಾ.ಶಿ.ಇಲಾಖೆ ಮೈಸೂರು ವಿಭಾಗ ಮೈಸೂರು ರವರ ಪತ್ರದ ದಿ:19-12-2021.

3. ಮಾನ್ಯ ಕರ್ನಾಟಕ ಆಡಳಿತ ಮಂಡಳಿಯಲ್ಲಿನ ಅರ್ಜಿ ಸಂಖ್ಯೆ 5957/2021.

@@##@@

ವಿಷಯಕ್ಕೆ ಸಂಬಂಧಿಸಿದಂತೆ 2020-21 ನೇ ಸಾಲಿನ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರ ವಿಭಾಗದ ಹೊರಗಿನ ಕೋರಿಕೆ ವರ್ಗಾವಣೆಯ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಉಲ್ಲೇಖ(1)ರ ಪರಿಷ್ಕೃತ ವೇಳಾ ಪಟ್ಟಿಯಂತೆ ದಿನಾಂಕ;24-12-2021 ರಿಂದ ದಿನಾಂಕ:10-01-2022 ರ ವರೆಗೆ ನಡೆಸಬೇಕಾಗಿರುತ್ತದೆ.

ಉಲ್ಲೇಖ(2)ರಲ್ಲಿನ ಪತ್ರದಂತೆ ಮಾನ್ಯ ಕರ್ನಾಟಕ ಆಡಳಿತ ಮಂಡಳಿಯಲ್ಲಿ ಸಲ್ಲಿಸಿರುವ ಅರ್ಜಿ ಸಂಖ್ಯೆ 5957/2021 ರ ಪ್ರಕರಣಕ್ಕೆ ಸಂಬಂಧಿಸಿದಂತೆ 2020-21 ನೇ ಸಾಲಿನ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರ ಮೈಸೂರು ವಿಭಾಗದ ಒಳಗಿನ ಕೋರಿಕೆ ವರ್ಗಾವಣೆಗೆ ತಡೆಯಾಜ್ಞೆ ನೀಡಿರುವುದರಿಂದ ಮೈಸೂರು ವಿಭಾಗದ ಒಳಗಿನ ಕೋರಿಕೆ ವರ್ಗಾವಣೆಯನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ ಎಂದು ತಿಳಿಸಿರುತ್ತಾರೆ. ಸದರಿ ವಿಭಾಗದ ಒಳಗಿನ ಕೋರಿಕೆ ವರ್ಗಾವಣೆ ಪ್ರಕ್ರಿಯೆಯು ಮುಗಿದ ನಂತರವೇ ವಿಭಾಗದ ಹೊರಗಿನ ಕೋರಿಕೆ ವರ್ಗಾವಣೆ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕಾಗಿರುವುದರಿಂದ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರ ವಿಭಾಗದ ಹೊರಗಿನ ಕೋರಿಕೆ ವರ್ಗಾವಣೆಯ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಮುಂದೂಡಿದೆ. ಮುಂದಿನ ಕೌನ್ಸಿಲಿಂಗ್ ದಿನಾಂಕಗಳನ್ನು ನಂತರ ಪ್ರಕಟಿಸಲಾಗುವುದು.

ನಿರ್ದೇಶಕರು(ಪ್ರೌಢ ಶಿಕ್ಷಣ)

ಇವರಿಗೆ:

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಮಾಹಿತಿಗಾಗಿ/ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮಾಹಿತಿಗಾಗಿ/ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು:

1. ನಿರ್ದೇಶಕರು(ಇತರೆ ಪರೀಕ್ಷೆಗಳು)ಹಾಗೂ ವರ್ಗಾವಣೆ ಕೋಶ ಪ್ರಕ್ರಿಯೆ ನಿಯಂತ್ರಣಾಧಿಕಾರಿಗಳು ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು.
2. ಜಂಟಿ ನಿರ್ದೇಶಕರು(ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ,ಆಯುಕ್ತರ ಕಛೇರಿ ಬೆಂಗಳೂರು.
3. ಕಛೇರಿ ಪ್ರತಿ.